## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಮೆ: ಗ್ರೀನ್ ಇನ್ಫ್ರಾ ವಿಂಡ್ ಟೆಕ್ನಾಲಿಜಿ ಲಿಮಿಟೆಡ್, ರವರಿಗೆ ಮೆ :ಪ್ರಕೃತಿ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಂದ ವರ್ಗಾಯಿಸಲ್ಪಟ್ಟ 3.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯವನ್ನು 48.00 ಮೆ.ವ್ಯಾ.ಗೆ ಹೆಚ್ಚಿಸುವ ಕುರಿತು.

**ಓದಲಾಗಿದೆ:** 1) ಸರ್ಕಾರಿ ಆದೇಶ ಸಂಖ್ಯೆ: ಇಎನ್ 247 ಎನ್‌ಸಿಇ 2012 ದಿನಾಂಕ: 14.05.2013.

2) ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ, ವ್ಯವಸ್ಥಾಪಕ ನಿರ್ದೇಶಕರ ಪತ್ರಗಳ ಸಂಖ್ಯೆ: KRED/08/GIWSL-3.00 to 48 MW/ 2013/1410 ದಿನಾಂಕ: 17.06.2013. ಮತ್ತು KRED/08/GIWSL-3.00 to 48 MW/ 2013/1715 ದಿನಾಂಕ: 19.07.2013.

* * *

**ಪ್ರಸ್ತಾವನೆ:-**

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರಿ ಆದೇಶದಲ್ಲಿ ಮೆ: ಪ್ರಕೃತಿ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಗೆ ಚಿತ್ರದುರ್ಗ, ದಾವಣಗೆರೆ ಮತ್ತು ಕೋಲಾರ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 20.00 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಹಂಚಿಕೆ ಆದೇಶದ ಕ್ರಮ ಸಂಖ್ಯೆ (1) ರಲ್ಲಿ ದಾವಣಗೆರೆ ಜಿಲ್ಲೆಯಲ್ಲಿ ಹಂಚಿಕೆಯಾಗಿರುವ ಅಂಶಿಕ 6.00 ಮೆ.ವ್ಯಾ. ಸಾಮರ್ಥ್ಯದ Part-B 3.00 ಮೆ.ವ್ಯಾ. ಸಾಮರ್ಥ್ಯವನ್ನು ಮೆ: ಗ್ರೀನ್ ಇನ್ಫ್ರಾ ವಿಂಡ್ ಟೆಕ್ನಾಲಜಿ ಲಿಮಿಟೆಡ್ ರವರಿಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ವರ್ಗಾಯಿಸಿ ಆದೇಶಿಸಲಾಗಿತ್ತು.

| Sl. No. | Transfered capacity in MW | Near by villages of the proposed area and district. | Geographical area description of the project |
|---|---|---|---|
| 1 | 3 MW (5x600kW) | Ananthanahalli village, Harapanahalli Taluk, Davangere District. | **PART-B (3MW):** **Latitude**: 14°45'0"- 14°46'30" N **Longitude**: 75°56'33"- 76°0'0" E **Ridge peaks:** 675, 682,641 & 684m Amsl |

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ಪತ್ರಗಳಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು ಮೆ: ಪ್ರಕೃತಿ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಂದ ಮೆ: ಗ್ರೀನ್ ಇನ್ಫ್ರಾ ವಿಂಡ್ ಪವರ್ ಟೆಕ್ನಾಲಜಿ ಲಿಮಿಟೆಡ್ ರವರಿಗೆ ವರ್ಗಾಯಿಸಿ ಆದೇಶಿಸಿರುವ 3.00 ಮೆ.ವ್ಯಾ. ಸಾಮರ್ಥ್ಯವನ್ನು 48.00 ಮೆ.ವ್ಯಾ.ಗೆ ಹೆಚ್ಚಿಸಲು ಶಿಫಾರಸ್ಸು ಮಾಡಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ ಹಾಗೂ ಸದರಿ ಯೋಜನೆಯು ಖಾಸಗಿ ಜಮೀನಿನಲ್ಲಿ ಬರುತ್ತಿದ್ದು, ಉತ್ಪಾದಿತ ವಿದ್ಯುತ್ತನ್ನು ಗ್ರೂಪ್ ಕ್ಯಾಪೀಟಿವ್/ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲಾಗುವುದೆಂದು ಮತ್ತು ಯೋಜನೆಯನ್ನು 2014-15 ರೊಳಗಾಗಿ ಅನುಷ್ಠಾನಗೊಳಿಸುವುದಾಗಿ ವರದಿ ಮಾಡಿರುತ್ತಾರೆ.

---2)

ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 175 ಎನ್‌ಸಿಇ 2013,**
**ಬೆಂಗಳೂರು, ದಿನಾಂಕ: 14.08.2013.**

ಮೆ: ಪ್ರಕೃತಿ ವಿಂಡ್ ಎನರ್ಜಿ ಪ್ರೈವೇಟ್ ಲಿಮಿಟೆಡ್ ರವರಿಂದ ಮೆ: ಗ್ರೀನ್ ಇನ್ಫ್ರಾ ವಿಂಡ್ ಟೆಕ್ನಾಲಜಿ ಲಿಮಿಟೆಡ್ ರವರಿಗೆ ವರ್ಗಾವಣೆಗೊಂಡಿರುವ 3.00 ಮೆ.ವ್ಯಾ. ಸಾಮರ್ಥ್ಯವನ್ನು 48.00 ಮೆ.ವ್ಯಾಗೆ ಈ ಕೆಳಗಿನ ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಕೆಳಕಂಡ ಷರತ್ತಿಗೊಳಪಟ್ಟು ಹೆಚ್ಚಿಸಿ ಆದೇಶಿಸಿದೆ.

| Near by villages of the propsed area and District | Geographical area description of the project | Sanctioned/ Trans fer capacity in MW | Enhancement proposed in MW | Total capacity including propsed enhancement in MW |
|---|---|---|---|---|
| Ananthana h alli in Harapanahalli Taluk Davangere District | **PART-B**<br>**Latitude**: 14°45'0"-14°46'30" N<br>**Longitude**: 75°56'33"-76°0'0" E<br>**Ridge peaks:** 675, 682,641 & 684m Amsl.<br>**Toposheet No: 48 N/13** | 3.00 MW | 45 MW | 48 MW (2000 kW x 24 Nos) |

1 ಮೆ:: ಗ್ರೀನ್ ಇನ್ಫ್ರಾ ವಿಂಡ್ ಪವರ್ ಟೆಕ್ನಾಲಜಿ ಲಿಮಿಟೆಡ್ ರವರು 45 ದಿನಗಳ ಒಳಗಾಗಿ ಸರ್ಕಾರಿ ಆದೇಶ ಸಂಖ್ಯೆ ಇಎನ್ 435 ಎನ್‌ಸಿಇ 2011 ದಿನಾಂಕ 06.1.2012 ರನ್ವಯ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಮೆ:: ಗ್ರೀನ್ ಇನ್ಫ್ರಾ ವಿಂಡ್ ಪವರ್ ಟೆಕ್ನಾಲಜಿ ಲಿಮಿಟೆಡ್ ರವರು ಉತ್ಪಾದಿಸುವ ವಿದ್ಯುತ್ತನ್ನು ಗ್ರೂಪ್ ಕ್ಯಾಪೀಟಿವ್/ವೀಲಿಂಗ್ ಮತ್ತು ಬ್ಯಾಂಕಿಂಗ್ ಮೂಲಕ 3ನೇ ವ್ಯಕ್ತಿಗೆ ಮಾರಾಟಮಾಡಲು ಅನುಮತಿಸಿದೆ.

3 ಮೆ:: ಗ್ರೀನ್ ಇನ್ಫ್ರಾ ವಿಂಡ್ ಪವರ್ ಟೆಕ್ನಾಲಜಿ ಲಿಮಿಟೆಡ್ ರವರು ಬಾಕಿ ಉಳಿದಿರುವ ಶುಲ್ಕವನ್ನು ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು.

4 ಅಭಿವೃದ್ಧಿದಾರರು ಯೋಜನೆಯನ್ನು 2014-15 ರ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.

5 ಸದರಿ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,

ಇವರಿಗೆ:
ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು, ಇವರಿಗೆ ಪ್ರಕಟಣೆಗಾಗಿ.

---3)